3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,ರವರ ನ್ಯಾಯಾಲಯ, ಕಡೂರು.

**ಸಿ.ಸಿ.ನಂ.73/2020**

ಪಿರ್ಯಾದುದಾರರು ಃ ಸರ್ಕಾರದ ಪರವಾಗಿ ಬೀರೂರು ಪೊಲೀಸರಿಂದ

-ವಿರುದ್ಧ-

ಆರೋಪಿತರು ಃ ಪ್ರಭು ಕೆ. ಹಾಲಿಹಾಳ್ ಬಿನ್ ಕುಡ್ಲಪ್ಪ, 40 ವರ್ಷ, ಕೆ ಎಸ್ ಆರ್ ಟಿ. ಸಿ ಬಸ್ ಚಾಲಕ, ತೋಗುಣಶಿ ಗ್ರಾಮ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.

-ಃಆಪಾದನೆಃ-

ದಿನಾಂಕಃ 05.08.2019 ರಂದು ಬೆಳಗ್ಗೆ 11-00 ರ ಸಮಯದಲ್ಲಿ ಬೀರೂರು ಠಾಣಾ ವ್ಯಾಪ್ತಿ ಜೋಡಿತಿಮ್ಮಾಪುರ ಗ್ರಾಮದ ಗೇಟ್ ಬಳಿ ಚಾಸಾ-4 ಪ್ರಕಾಶ ಕೆಎ-13/ಇಎಫ್-6371 ರ ಸ್ಪೆಂಡರ್ ಪ್ಲಸ್ ಬೈಕಿನಲ್ಲಿ ಅವರ ತಾಯಿ ಮೃತೆ ದೇವಿರಮ್ಮರವನ್ನು ಹಿಂಬದಿಯಲ್ಲಿ ಕೂರಿಸಿಕೊಂಡು ಹೋಗುತ್ತಿರುವಾಗ ಆರೋಪಿಯಾದ ನೀವು ನಿಮ್ಮ ಬಾಬ್ತು ಕೆಎ 14-ಎಫ್-0048 639 ರ ಸಂಖ್ಯೆಯ ಕೆ ಎಸ್ ಆರ್ ಟಿ. ಸಿ ಬಸ್‌ನ್ನು ಸಾರ್ವಜನಿಕ ರಸ್ತೆಯಲ್ಲಿ ಅತಿವೇಗ ಮತ್ತು ಅಜಾಗರೂಕತೆಯಿಂದ ಹಾಗೂ ನಿರ್ಲಕ್ಷ್ಯತನದಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಬೈಕನ್ನು ಹಿಂಬದಿಯಿಂದ ಓವರ್ಟೇಕ್ ಮಾಡಿ, ತಕ್ಷಣ ಬಸ್ಸನ್ನು ಎಡಭಾಗಕ್ಕೆ ತೆಗೆದುಕೊಂಡಿದ್ದರಿಂದ ಬಸ್ಸಿನ ಎಡ ಭಾಗದ ಹಿಂಬದಿ ಚಾಸಾ-4 ರವರ ಬೈಕಿಗೆ ಡಿಕ್ಕಿ ಪಡಿಸಿ ಅಪಘಾತವನ್ನುಂಟು ಮಾಡಿದ್ದೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆಯ ಕಲಂ 279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಬಸ್ಸಿನಿಂದ ಬೈಕಿಗೆ ಡಿಕ್ಕಿ ಪಡಿಸಿದ ಪರಿಣಾಮ ಚಾಸಾ-4 ರವರು ಹಾಗೂ ಅವರ ತಾಯಿ ದೇವಿರಮ್ಮ ಇಬ್ಬರು ಬೈಕ್ ಸಮೇತ ರಸ್ತೆಯ ಮೇಲೆ ಬಿದ್ದು, ಚಾಸಾ-4 ರವರಿಗೆ ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತವೆ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆಯ ಕಲಂ 337 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಬಸ್ಸಿನಿಂದ ಬೈಕಿಗೆ ಡಿಕ್ಕಿ ಪಡಿಸಿದ ಪರಿಣಾಮ ಚಾಸಾ-4 ರವರು ಹಾಗೂ ಅವರ ತಾಯಿ ದೇವಿರಮ್ಮ ಇಬ್ಬರು ಬೈಕ್ ಸಮೇತ ರಸ್ತೆಯ ಮೇಲೆ ಬಿದ್ದು, ತಲೆಯ ಹಿಂಬದಿಯ ಬಲಭಾಗಕ್ಕೆ ಪೆಟ್ಟು ಬಿದ್ದು ರಕ್ತಗಾಯವಾಗಿದ್ದು, ಬೀರೂರು ಹಾಗೂ ಶಿವಮೊಗ್ಗ ಹಾಗೂ ಮಂಗಳೂರಿನ ವೆನ್ ಲಾಕ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿದರೂ ಸಹ ಫಲಕಾರಿಯಾಗದೆ ದಿನಾಂಕ 9-8-2019 ರಂದು ರಾತ್ರಿ ಸುಮಾರು 11.45 ಕ್ಕೆ ಮೃತಪಟ್ಟಿರುತ್ತಾರೆ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆಯ ಕಲಂ 304(ಎ)ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತೀರಿ.

1. ನಿಮಗೆ ಈಗ ಓದಿ ಹೇಳಿದ ಆರೋಪವು ತಿಳಿಯಿತೆ?

ಉಃ

2. ನಿಮ್ಮ ಮೇಲೆ ಇರುವ ಆರೋಪವನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೆ?

ಉಃ

ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

ದಿನಾಂಕಃ 19.04.2022

ಸಹಿ/-
**(ದೀಪು ಎಂ.ಟಿ.)**
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ., ಕಡೂರು.